**1** ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿರವರ ನ್ಯಾಯಾಲಯ, ಮೂಡಿಗೆರೆ

ಸಿ.ಸಿ.ನಂಃ **900/2025**

| | | |
|---|---|---|
| ಫಿರ್ಯಾದಿ | : | ಮೀನಾಕ್ಷಿ ಬಾಯಿ,<br>ವಯಸ್ಸು ಸುಮಾರು 35 ವರ್ಷ,<br>ಕೋಂ ರಾಜು ನಾಯಕ್,<br>ವಾಸಃ ಕೆಲ್ಲೂರು ಗ್ರಾಮ, ಹೆಸ್ಗಲ್ ಅಂಚೆ,<br>ಮೂಡಿಗೆರೆ ತಾಲ್ಲೂಕು,<br>ಚಿಕ್ಕಮಗಳೂರು ಜಿಲ್ಲೆ. |

ವಿರುದ್ಧ

| | | |
|---|---|---|
| ಆರೋಪಿ | : | ರಕ್ಷಿತಾ ಬಿ.ಎಸ್, ವಯಸ್ಸು ಸುಮಾರು 25 ವರ್ಷ,<br>ಕೋಂ ಅವಿನಾಶ್,<br>ವಾಸಃ ಕೊಳೂರು, ಬಡವಣದಿಣ್ಣೆ ಗ್ರಾಮ,<br>ಕೆಂಜಿಗೆ ಅಂಚೆ, ಮೂಡಿಗೆರೆ ತಾಲ್ಲೂಕು,<br>ಚಿಕ್ಕಮಗಳೂರು ಜಿಲ್ಲೆ. |

* * * * *

## ಭಾರತೀಯ ನಾಗರಿಕ ಸುರಕ್ಷಾ ಸಂಹಿತಾ ಕಲಂ **351** ರ ಅಡಿಯಲ್ಲಿ ಮಾಡಿಕೊಳ್ಳಲಾದ ಆರೋಪಿಯ ಹೇಳಿಕೆ

ಪ್ರಶ್ನೆ.1) ಫಿರ್ಯಾದುದಾರರ ಪರ ಹಾಜರಾದ ಸಾಕ್ಷಿದಾರರ ಹೇಳಿಕೆಗಳನ್ನು ಕೇಳಿದ್ದೀರಾ?

ಆರೋಪಿಯ ಉತ್ತರಃ

ಪ್ರಶ್ನೆ.2) ಪ್ರಾಸಾ-1 ಮೀನಾಕ್ಷಿ ಬಾಯಿ ರವರು ತಮ್ಮ ಮುಖ್ಯ ವಿಚಾರಣೆಯಲ್ಲಿ ಆರೋಪಿಯಾದ ನೀವು ಪಿರ್ಯಾದುದಾರರನ್ನು ಸಂಪರ್ಕಿಸಿ, ನಿಮ್ಮ ತುರ್ತು ಅವಶ್ಯಕತೆಗಳಿಗೋಸ್ಕರ ಅವರಿಂದ 2,00,000/- ರೂಪಾಯಿಗಳನ್ನು ಸಾಲವಾಗಿ ಪಡೆದಿರುತ್ತೀರಿ ಎಂದು ಸಾಕ್ಷ್ಯ ನುಡಿದಿರುತ್ತಾರೆ. ಇದಕ್ಕೆ ನಿಮ್ಮ ಉತ್ತರವೇನು?

ಆರೋಪಿಯ ಉತ್ತರಃ

ಪ್ರಶ್ನೆ.3) ಪ್ರಾಸಾ-1 ರವರು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ ಸದರಿ ಹಣದ ಮರುಪಾವತಿಗಾಗಿ ನಿಮ್ಮ ಖಾತೆ ಹೊಂದಿರುವ ಕೆನರಾ ಬ್ಯಾಂಕ್, ಜೋಗಣ್ಣನಕೆರೆ ಶಾಖೆಯ ಚೆಕ್ ಸಂಖ್ಯೆಃ 643345, ದಿನಾಂಕ 06.01.2025, ರೂ.2,00,000/- ಎಂದು ನಮೂದಿಸಿ ನೀಡಿರುತ್ತೀರಿ ಎಂದು ಸಾಕ್ಷ್ಯ ನುಡಿದಿರುತ್ತಾರೆ. ಇದಕ್ಕೆ ನಿಮ್ಮ ಉತ್ತರವೇನು?

ಆರೋಪಿಯ ಉತ್ತರಃ

ಪ್ರಶ್ನೆ.4) ಪ್ರಾಸಾ-1 ರವರು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ ಸದರಿ ಚೆಕ್ ಅನ್ನು ಫಿರ್ಯಾದಿಯು ಕರ್ನಾಟಕ ಬ್ಯಾಂಕ್, ಗೋಣಿಬೀಡು ಶಾಖೆಯಲ್ಲಿ ಜಮೆಗಾಗಿ ಸಲ್ಲಿಸಿದಾಗ "ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣ ಇಲ್ಲ" (Funds Insufficient) ಎಂದು ಹಿಂಬರಹದ ಮೂಲಕ ಹಿಂದಿರುಗಿಸಿರುತ್ತಾರೆ ಎಂದು ನಿಮ್ಮ ವಿರುದ್ಧ ಸಾಕ್ಷ್ಯ ನುಡಿದಿರುತ್ತಾರೆ. ಇದಕ್ಕೆ ನಿಮ್ಮ ಉತ್ತರವೇನು?

ಆರೋಪಿಯ ಉತ್ತರಃ

ಪ್ರಶ್ನೆ.5) ಪ್ರಾಸಾ-1 ರವರು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ ನಂತರ ದಿನಾಂಕಃ 11.01.2025 ರಂದು ನಿಮಗೆ ಕಾನೂನುಬದ್ಧ ನೋಟೀಸು ನೀಡಿದ್ದು, ಸದರಿ ನೋಟೀಸು ನಿಮಗೆ ತಲುಪಿದರು ನೀವು ಸದರಿ ಹಣವನ್ನು ಪಾವತಿ ಮಾಡಿರುವುದಿಲ್ಲ ಹಾಗೂ ಆ ನೋಟೀಸಿಗೆ ಯಾವುದೇ ಉತ್ತರ ನೀಡಿರುವುದಿಲ್ಲ ಎಂದು ಸಾಕ್ಷ್ಯ ನುಡಿದಿರುತ್ತಾರೆ. ಇದಕ್ಕೆ ನಿಮ್ಮ ಉತ್ತರವೇನು?

ಆರೋಪಿಯ ಉತ್ತರಃ

ಪ್ರಶ್ನೆ.6) ನಿಮ್ಮಗೆ ಈ ಪ್ರಕರಣದ ಬಗ್ಗೆ ನ್ಯಾಯಾಲಯಕ್ಕೆ ಏನಾದರೂ ಹೇಳುವುದು ಇದೆಯೇ ?

ಆರೋಪಿಯ ಉತ್ತರಃ

ಪ್ರಶ್ನೆ.7) ನಿಮ್ಮ ಪರವಾಗಿ ಸಾಕ್ಷಿ ವಿಚಾರಣೆ ಇದೆಯೇ?

ಆರೋಪಿಯ ಉತ್ತರಃ

(ಮೇಲಿನ ಸಾಕ್ಷಿದಾರರ ಎಲ್ಲಾ ಹೇಳಿಕೆಗಳನ್ನು ಶೀಘ್ರಲಿಪಿಗಾರರಿಗೆ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಿಸಿ, ಆರೋಪಿತನಿಗೆ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಯಥಾವತ್ತಾಗಿ ಬರೆದುಕೊಂಡಿರುತ್ತೇನೆಂದು ದೃಢಪಡಿಸಿಕೊಳ್ಳಲಾಗಿದೆ)

ಸಹಿ/-
1 ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆಎಮ್‌ಎಫ್‌ಸಿ
ನ್ಯಾಯಾಲಯ, ಮೂಡಿಗೆರೆ.

ಮೂಡಿಗೆರೆ.
ದಿನಾಂಕಃ 21.07.2026.

ಆರೋಪಿಯ ಸಹಿಃ